## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕಿನ ಬಿಳಿಗೆರೆ ಮತ್ತು ಇತರೆ 12 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂ:ಗ್ರಾಅಪ/71/ಗ್ರಾನೀಸ(5)2016 ದಿನಾಂಕ:17.12.2016.
2. ದಿನಾಂಕ:28.02.2022ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation & EOT ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತ ಸಂಖ್ಯೆ:ಗ್ರಾಅಪ/550/ಗ್ರಾಕುನೀ&ನೈಇ/2017-18.

---

**ಪೀಠಿಕೆ:**

ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕಿನ ಬಿಳಿಗೆರೆ ಮತ್ತು ಇತರೆ 12 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.696.12ಲಕ್ಷಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ಯೋಜನೆ ಕಾಮಗಾರಿಯ ಟೆಂಡರ್ ಐಟಂಗಳ ಪ್ರಮಾಣಗಳಿಗಿಂತ ಹೆಚ್ಚುವರಿ ಅನುಷ್ಠಾನ ಹಾಗೂ ಟೆಂಡರ್‌ನಲ್ಲಿ ಇಲ್ಲದಿರುವ ಹೊಸ ಐಟಂಗಳನ್ನು ಸೇರ್ಪಡೆಗೊಳಿಸಿ ಅನುಷ್ಠಾನಗೊಳಿಸಿರುವುದರಿಂದ ಅಂದಾಜು ಮೊತ್ತ **ರೂ.996.79ಲಕ್ಷಗಳಿಗೆ** ಪರಿಷ್ಕೃತವಾಗಿರುತ್ತದೆ.

ದಿನಾಂಕ:28.02.2022ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮೇಲೆ ಓದಲಾದ (3)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ. ಆದ್ದರಿಂದ ಮೇಲೆ ಓದಲಾದ (2)ರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಅನುಮೋದನೆ ನೀಡುವ ಅವಶ್ಯವಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/219/ಗ್ರಾನೀಸ(4)2022 ಬೆಂಗಳೂರು, ದಿನಾಂಕ:05.04.2022.** 434

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕಿನ ಬಿಳಿಗೆರೆ ಮತ್ತು ಇತರೆ 12 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ **ರೂ.996.79ಲಕ್ಷ (ಒಂಭೈನೂರ ತೊಂಭತ್ತಾರು ಲಕ್ಷದ ಎಪ್ಪತ್ತೊಂಭತ್ತು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ** 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತಾಪಿತ ಕಾಮಗಾರಿಗೆ ಸಕ್ಷಮ ಪ್ರಾಧಿಕಾರದಿಂದ ಅವಶ್ಯವಿರುವ ಅನುಮೋದನೆ ಪಡೆದು ನಂತರ ಮುಂದಿನ ಕ್ರಮವಹಿಸಬೇಕು. ಅನುಮೋದನೆ ನೀಡಲಾದ ಅಂದಾಜಿನ ವ್ಯಾಪ್ತಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸತಕ್ಕದ್ದು. ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಈ ಆದೇಶದಲ್ಲಿ ಅನುಮೋದನೆಯಾಗಿರುವ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಶಿಫಾರಸ್ಸು ಆಧರಿಸಿ ಅನುದಾನ ಬಿಡುಗಡೆಯಾಗತಕ್ಕದ್ದು ಹಾಗೂ ಸದರಿ ವೆಚ್ಚವನ್ನು 2022-23ರ ಸಾಲಿನ IMISನಲ್ಲಿ ಅಳವಡಿಸಲು ಸೂಚಿಸಿದೆ.

4. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ -AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ತುಮಕೂರು.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ. &. ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.

..3

6. ನಿರ್ದೇಶಕರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ತುಮಕೂರು**.
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಂಗಳೂರು**.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸಂಪಾದಕರು, **"ಕರ್ನಾಟಕ ವಿಕಾಸ"**, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ತುಮಕೂರು**.
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.